# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 183 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.12.2018 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ವಿವಿಧ ಯೋಜನೆಗಳು ನಿಗದಿತ ಗುರಿ ತಲುಪುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಿಗಧಿತ ಗುರಿ ತಲುಪುವಲ್ಲಿ ವಿಫಲವಾಗಿರುವುದಿಲ್ಲ. |
| ಆ) | ರಾಜ್ಯದ ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಇರುವ ಗಂಗಾ ಕಲ್ಯಾಣ ಮತ್ತು ಇತರೆ ಸಾಲ, ನೆರವು, ಆರ್ಥಿಕ ಅಭಿವೃದ್ಧಿ ಯೋಜನೆಗಳೂ ನಿರೀಕ್ಷಿತ ಗುರಿ ತಲುಪದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ರಾಜ್ಯದ ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಇರುವ ಗಂಗಾ ಕಲ್ಯಾಣ ಮತ್ತು ಇತರ ಸಾಲ, ನೆರವು, ಆರ್ಥಿಕ ಅಭಿವೃದ್ಧಿ ಯೋಜನೆಗಳಲ್ಲಿ ನಿರೀಕ್ಷಿತ ಗುರಿ ತಲುಪಲಾಗಿದೆ. |
| ಇ) | ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಇರುವ ಯೋಜನೆಗಳಾವುವು; ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿಗಾಗಿ ಕಾಯ್ದಿರಿಸಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು; | ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಜನರ ಆರ್ಥಿಕ ಅಭಿವೃದ್ಧಿಗಾಗಿ ಇರುವ ಯೋಜನೆಗಳು ಈ ಕೆಳಕಂಡಂತಿವೆ.<br>1. ಸ್ವಯಂ ಉದ್ಯೋಗ ಸಾಲ ಯೋಜನೆಗಳು.<br>2. ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆಗಳು.<br>3. ಅರಿವು-ಶೈಕ್ಷಣಿಕ ಸಾಲ ಯೋಜನೆ.<br>4. ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>5. ತರಬೇತಿ ಕಾರ್ಯಕ್ರಮಗಳು.<br>ನಿಗಮದಿಂದ ಕಳೆದ 3 ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಜನರ ಅಭಿವೃದ್ಧಿಗಾಗಿ ಕಾಯ್ದಿರಿಸಿದ ಮೊತ್ತ ರೂ.77801.00 ಲಕ್ಷಗಳು ಹಾಗೂ ಖರ್ಚು ಮಾಡಿದ ಮೊತ್ತ ರೂ.75767.19 ಲಕ್ಷಗಳು. |
| ಈ) | 2017-18ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ನಿರ್ಮಿಸಲಾಗಿರುವ ಕೊಳವೆಬಾವಿಗಳ ಸಂಖ್ಯೆ ಎಷ್ಟು; | 2017-18ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ನಿರ್ಮಿಸಲಾಗಿರುವ ಕೊಳವೆಬಾವಿಗಳ ಸಂಖ್ಯೆ: 4280. |

........2

| | | |
|---|---|---|
| ಉ) | ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಕಾಲಮಿತಿಯಲ್ಲಿ ಅನುಷ್ಠಾನ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ? | ನಿಗಮದಿಂದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಕಾಲಮಿತಿಯಲ್ಲಿ ಅನುಷ್ಠಾನ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಂಡಿದೆ.<br>1. ಸರ್ಕಾರವು ಪ್ರತಿ ಆರ್ಥಿಕ ವರ್ಷದಲ್ಲಿ ಒದಗಿಸುವ ಆಯವ್ಯಯಕ್ಕೆ ಅನುಗುಣವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸುವುದಕ್ಕಾಗಿ ಕ್ರಿಯಾ ಯೋಜನೆಯನ್ನು ರೂಪಿಸಲಾಗಿದೆ. ಕ್ರಿಯಾ ಯೋಜನೆ ಪ್ರಕಾರ ಆರ್ಥಿಕ ಮತ್ತು ಭೌತಿಕ ಗುರಿ ನಿಗದಿಪಡಿಸಿ ಅದರಂತೆ ಅರ್ಜಿಗಳನ್ನು ಆಹ್ವಾನಿಸಿ, ಸ್ವೀಕೃತಗೊಂಡ ಅರ್ಜಿಗಳನ್ನು ಫಲಾನುಭವಿಗಳನ್ನು ಆಯ್ಕೆ ಮಾಡಲು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿಯ ಮುಂದೆ ಸಕಾಲದಲ್ಲಿ ಮಂಡಿಸಲಾಗುತ್ತದೆ. ಆಯ್ಕೆ ಸಮಿತಿಗಳು ಆಯಾಯ ಯೋಜನೆಯ ಮಾರ್ಗಸೂಚಿ ಮತ್ತು ಸರ್ಕಾರದ ಆದೇಶಗಳನ್ವಯ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತಿದೆ. ಆಯ್ಕೆಯಾದ ಫಲಾನುಭವಿಗಳಿಗೆ ಅವರು ಕೈಗೊಳ್ಳುವ ಆರ್ಥಿಕ ಚಟುವಟಿಕಗಳ ಅನುಸಾರ ಮಂಜೂರಾದ ಸೌಲಭ್ಯವನ್ನು ಆರ್.ಟಿ.ಜಿ.ಎಸ್/ಡಿ.ಬಿ.ಟಿ. ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗುತ್ತಿದೆ.<br>2. ಹಿಂದುಳಿದ ವರ್ಗಗಳ ಜನರಿಗೆ ಅರ್ಜಿಗಳು ಸುಲಭವಾಗಿ ದೊರಕಲು ನಿಗಮದ ವೆಬ್‌ಸೈಟ್‌ನಲ್ಲಿ ಅರ್ಜಿ ನಮೂನೆಯನ್ನು ಅಳವಡಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಅರಿವು-ಶೈಕ್ಷಣಿಕ ಸಾಲ ಯೋಜನೆಯಲ್ಲಿ ಅನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕ್ರಮ ವಹಿಸಲಾಗಿದೆ.<br>3. ಗಂಗಾ ಕಲ್ಯಾಣ ಯೋಜನೆಯಡಿ ಆಯಾ ಆರ್ಥಿಕ ವರ್ಷದ ಗುರಿಯ ಕೊಳವೆ ಬಾವಿಗಳನ್ನು ಕೊರೆದು ಪಂಪು ಮತ್ತು ಪೂರಕ ಸಾಮಗ್ರಿಗಳನ್ನು ಒದಗಿಸಿ ತ್ವರಿತವಾಗಿ ವಿದ್ಯುದ್ಧೀಕರಣಗೊಳಿಸಲು ಎಲ್ಲಾ ಕ್ರಮ ಕೈಗೊಳ್ಳಲಾಗುವುದು. |

ಸಂ: ಹಿಂವಕ 1194 ಬಿಎಂಎಸ್ 2018

(ಸಿ.ಪುಟ್ಟರಂಗಶೆಟ್ಟಿ)
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.